ಕರ್ನಾಟಕ ಸರ್ಕಾರ

ದಿನಾಂಕ: 31–08–2017

# ಮುಂದಿನ ವರ್ಷದ ಅಕ್ಟೋಬರ್ 2 ರ ವೇಳೆಗೆ ಬಯಲು ಬಹಿರ್ದೆಸೆ ಮುಕ್ತ ರಾಜ್ಯವಾಗಬೇಕು – ಮುಖ್ಯಮಂತ್ರಿ ಸಿದ್ದರಾಮಯ್ಯ



ಬೆಂಗಳೂರು, ಆ. 31

ಮುಂದಿನ ವರ್ಷದ ಅಕ್ಟೋಬರ್ 2 ರ ವೇಳೆಗೆ ನಗರ, ಸ್ಥಳೀಯ ಸಂಸ್ಥೆಗಳು ಬಯಲು ಬಹಿರ್ದೆಸೆ ಮುಕ್ತ ಆಗಬೇಕು. ಇದು ಸರ್ಕಾರದ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ನಗರಾಭಿವೃದ್ಧಿ ಇಲಾಖೆ ಹಾಗೂ ಪೌರಾಡಳಿತ ನಿರ್ದೇಶನಾಲಯ ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಏರ್ಪಡಿಸಿದ್ದ ನಗರೋತ್ಥಾನ (ಮುನಿಸಿಪಾಲಿಟಿ) 3ನೇ ಹಂತದ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು ಬಯಲು ಶೌಚಾಲಯದ ವ್ಯವಸ್ಥೆ ಈ ಹಿಂದಿನಿಂದಲೂ ನಡೆದುಕೊಂಡು ಬಂದಿದೆ. ಇದರಿಂದ ರೋಗರುಜಿನಗಳು ಹೆಚ್ಚುತ್ತವೆ. ಜೊತೆಗೆ ಪರಿಸರವು ಮಾಲಿನ್ಯವಾಗುತ್ತದೆ. ಆದ್ದರಿಂದ ಬಯಲು ಬಹಿರ್ದೆಸೆ ಮುಕ್ತ ಪ್ರದೇಶಗಳನ್ನಾಗಿ ಮಾಡುವುದು ಸರ್ಕಾರದ ಉದ್ದೇಶವಾಗಿದೆ. ಅದಲ್ಲದೆ ಪ್ರತಿಯೊಬ್ಬರಿಗೂ ಶೌಚಾಲಯ ವ್ಯವಸ್ಥೆ ಕಲ್ಪಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ನಗರ ಪ್ರದೇಶಗಳಲ್ಲಿ ಜನಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಅದಕ್ಕೆ ಅನುಗುಣವಾಗಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಸರ್ಕಾರದ ಜವಾಬ್ಧಾರಿಯಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಎಲ್ಲಾ ರೀತಿಯ ಕ್ರಮ ಕೈಗೊಂಡಿದೆ. ಅಧಿಕಾರಿಗಳು ಸರ್ಕಾರದ ಈ ಮಹತ್ವದ ಯೋಜನೆ ಸಫಲವಾಗುವಂತೆ ಆಧ್ಯತೆ ಮೇಲೆ ಕರ್ತವ್ಯ ನಿರ್ವಹಿಸಬೇಕು. ಸರ್ಕಾರ ಜನಪರ ಯೋಜನೆಗಳನ್ನು ರೂಪಿಸುತ್ತದೆ. ಕಾಮಗಾರಿಗಳು ವಿಳಂಬವಾದಲ್ಲಿ ಹಣಕಾಸಿನ ಹೊರೆ ಹೆಚ್ಚಾಗುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಅಧಿಕಾರಿಗಳು ಕಾಲಮಿತಿ ಅಳವಡಿಸಿಕೊಂಡು ಕೆಲಸಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸ್ವಚ್ಚ ಭಾರತ ಯೋಜನೆ ಹೊಸದೇನಲ್ಲ ಹಿಂದೆ ನಿರ್ಮಲ ಭಾರತ ಎಂಬ ಹೆಸರಿನಲ್ಲಿ ಕೆಲಸ ನಡೆಯುತ್ತಿತ್ತು. ಸ್ಮಾರ್ಟ್ ಸಿಟಿ ಯೋಜನೆಗೆ ಜಾಗ ಮತ್ತು ಹೆಚ್ಚಿನ ಅನುದಾನವನ್ನು ನಮ್ಮ ಸರ್ಕಾರ ಕೊಡುತ್ತಿದೆ ಎಂದರು.

ನಗರೋತ್ಥಾನ ಯೋಜನೆಯನ್ನು ಸರ್ಕಾರ ಮೂರು ಹಂತಗಳಲ್ಲಿ ಕೈಗೆತ್ತಿಕೊಂಡಿದ್ದು ಮೊದಲ ಹಂತದಲ್ಲಿ 1454 ಕೋಟಿ ರೂ. 2ನೇ ಹಂತದ ಯೋಜನೆಗೆ 2060 ಕೋಟಿ ರೂ. ಹಣ ಬಿಡುಗಡೆಮಾಡಿದ್ದು ಎರಡು ಹಂತದ ಕಾಮಗಾರಿಗಳು ಪೂರ್ಣಗೊಂಡಿದ್ದು ಮೂರನೇ ಹಂತದ ಯೋಜನೆಗೆ 2900 ಕೋಟಿ ರೂ. ಬಿಡುಗಡೆಮಾಡಿದ್ದು, ಕೂಡಲೇ ಕೆಲಸ ಆರಂಭಿಸುವಂತೆ ಸೂಚನೆ ನೀಡಿದ ಮುಖ್ಯಮಂತ್ರಿ ಅವರು ಗ್ರಾಮೀಣ ಪ್ರದೇಶಗಳಲ್ಲಿ 55 ಲಕ್ಷ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 4 ಲಕ್ಷ ಶೌಚಾಲಯಗಳನ್ನು ನಿರ್ಮಿಸಲಾಗುವುದು ಎಂದರು.

ರಾಜ್ಯದಲ್ಲಿ ದಿನೇ ದಿನೇ ನಗರೀಕರಣ ಜಾಸ್ತಿಯಾಗುತ್ತಿದ್ದು, ನಗರಕ್ಕೆ ಬರುತ್ತಿರುವವರ ಸಂಖ್ಯೆ ಹೆಚ್ಚಾಗುತ್ತಿದ್ದು ಅಂತಹ ಜನರಿಗೆ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸಲು ಸರ್ಕಾರ ಆದ್ಯತೆ ಮೇಲೆ ಕೆಲಸ ಮಾಡುತ್ತಿದೆ ಎಂದು ಪೌರಾಡಳಿತ ಸಚಿವ ಈಶ್ವರ್ ಖಂಡ್ರೆ ಅವರು ತಮ್ಮ ಪ್ರಾಸ್ತಾವಿಕ ಭಾಷಣದಲ್ಲಿ ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ನಗರಾಭಿವೃದ್ಧಿ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಿದ್ದರು. ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್, ಶಾಸಕರುಗಳು, ನಗರ,

ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಚುನಾಯಿತ ಜನ ಪ್ರತಿನಿಧಿಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಅಂಜುಮ್ ಪರ್ವೇಜ್ ಮೊದಲಿಗೆ ಸ್ವಾಗತಿಸಿದರು. ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ಡಾ. ವಿಶಾಲ್ ವಂದಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.